## .ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಶ್ರೀ ಬಿ. ಸಿ. ವಸಂತಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೊಸನಗರ ಇವರ ವಿರುದ್ಧದ ಇಲಾಖಾ ವಿಚಾರಣೆ – ದಂಡನೆ ವಿಧಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/57/ವಿಸೇಬಿ /2010 ದಿ: 04-02-2012.
2. ವಿಚಾರಣಾ ವರದಿ ದಿನಾಂಕ: 16-04-2013.
3. 2ನೇ ಕಾರಣ ಕೇಳುವ ನೋಟೀಸ್ ದಿನಾಂಕ: 17-05-2013
2. ಶ್ರೀ ಬಿ. ಸಿ. ವಸಂತಕುಮಾರ್ ಇವರ ಲಿಖಿತ ಹೇಳಿಕೆ ದಿ:27-7-2013.

------

**ಪ್ರಸ್ತಾವನೆ:**

ಶ್ರೀ ಬಿ. ಸಿ. ವಸಂತಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೊಸನಗರ ಇವರು ಈ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಿದ್ದ ಅವಧಿಯಲ್ಲಿ ಹಿಂದುಳಿದ ವರ್ಗ ಮತ್ತು ಅಲ್ಪ ಸಂಖ್ಯಾತರ ವಿದ್ಯಾರ್ಥಿ ನಿಲಯದ ಸಿಬ್ಬಂದಿಯವರ ತುಟ್ಟಿಭತ್ಯೆ , ಸರೆಂಡರ್ ರಜೆ ಸಂಬಳ ಹಾಗೂ 2007ರ ಪರಿಷ್ಕೃತ ವೇತನ ಶ್ರೇಣಿಯ ಬಾಕಿ ಹಣವನ್ನು ಪೂರಕ ಬಿಲ್ಲುಗಳಲ್ಲಿ ಡ್ರಾ ಮಾಡಿ ಪೂರ್ಣ ಹಣವನ್ನು ಸಂಬಂಧಪಟ್ಟ ನೌಕರರ ಬ್ಯಾಂಕ್ ಖಾತೆಗೆ ಜಮಾ ಮಾಡಿರುವುದಿಲ್ಲ. ಬದಲಾಗಿ ಬಿ.ಸಿಎಂ. ಇಲಾಖೆಯ ಸಿಬ್ಬಂದಿಯವರಿಂದ ವಿವಿಧ ರೀತಿಯಲ್ಲಿ ಪ್ರತಿ ಬಿಲ್ಲನಿಂದ ರೂ. 200, 500, 650, 800 ಹಾಗೂ ರೂ. 900/- ರಂತೆ ಕಡಿತಗೊಳಿಸಿ ವೈಯಕ್ತಿಕ ಖಾತೆಗಳಿಗೆ ಕಡಿಮೆ ಹಣವನ್ನು ಜಮಾ ಮಾಡಿ ಅಕ್ರಮವಾಗಿ ಕಡಿತಗೊಳಿಸಿದ ಹಣವನ್ನು ಶ್ರೀ ರಾಮಪ್ಪ, ಅಡುಗೆಯವರು, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಹೊಸನಗರ ಟೌನ್, ಇವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಿ ಕರ್ನಾಟಕ ಆರ್ಥಿಕ ಸಂಹಿತೆ 1958ರ ಅನುಚ್ಛೇದ 45, 52, 53, 62 ಮತ್ತು ಅನುಚ್ಛೇದ 3 ಉಲ್ಲಂಘಿಸಿರುವ ಆರೋಪಗಳ ಕುರಿತಂತೆ ಇಲಾಖಾ ವಿಚಾರಣೆ ನಡೆಸಲು ಶ್ರೀ ಕುಕ್ಕಾಜಿ ರಾಮಕೃಷ್ಣ ಭಟ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮೇಲೆ ಕ್ರಮ ಸಂಖ್ಯೆ(1) ರಲ್ಲಿ ಓದಲಾದ ದಿನಾಂಕ: 04-02-2012 ರ ಸರ್ಕಾರದ ಆದೇಶದಲ್ಲಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಯವರು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 16-04-2013. ರಂದು ವಿಚಾರಣಾ ವರದಿಯನ್ನು ಸಲ್ಲಿಸಿ ಅಪಾದಿತ ಅಧಿಕಾರಿ ವಿರುದ್ಧ ಮಾಡಿರುವ ಆರೋಪ ರುಜುವಾತಾಗಿದೆ ಎಂದು ವರದಿ ಸಲ್ಲಿಸಿದ್ದರು. ಅಪಾದಿತ ಅಧಿಕಾರಿಗೆ ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 17-05-2013. ರಂದು 2ನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿನಾಂಕ: 27-7-2013 ರಂದು ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿ ಯಾವುದೇ ಹಣ ದುರುಪಯೋಗ ಮತ್ತು ಕರ್ತವ್ಯಲೋಪ ಎಸಗಿರುವುದಿಲ್ಲವಾದ್ದರಿಂದ ಅವರ ಲಿಖಿತ ರಕ್ಷಣಾ ಹೇಳಿಕೆಯನ್ನು ಒಪ್ಪಿ ಆರೋಪದಿಂದ ದೋಷಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ವಿಚಾರಣಾ ವರದಿ ಹಾಗೂ ಶ್ರೀ ಬಿ.ಸಿ ವಸಂತ್‌ಕುಮಾರ್ ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟಿಸ್ಸಿಗೆ ನೀಡಿದ ಲಿಖಿತ ಹೇಳಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಪ್ರಕರಣದಲ್ಲಿ ಅಪಾದಿತ ಅಧಿಕಾರಿಯು ಸಿಬ್ಬಂದಿಯವರಿಂದ ಹಣ ಕಡಿತಗೊಳಿಸಿದ ಹಣವನ್ನು ಇನ್ನೊಬ್ಬ ನೌಕರನ ಖಾತೆಗೆ ಜಮಾ ಮಾಡುವಾಗ ಆರ್ಥಿಕ ಔಚಿತ್ಯಗಳ ಪಾಲನೆ ಮಾಡದೆ ಕರ್ತವ್ಯಲೋಪವೆಸಗಿರುವುದನ್ನು ಮನಗಂಡು ಹಾಗೂ ಇಲಾಖಾ ವಿಚಾರಣೆಯಲ್ಲಿ ರುಜುವಾತಾದ ಆರೋಪಗಳಿಗನುಗುಣವಾಗಿ ಸದರಿಯವರಿಗೆ ಕಾಲವೇತನ ಶ್ರೇಣಿಯಲ್ಲಿ ಒಂದು ಹಂತ 2 ವರ್ಷಗಳ ಅವಧಿಗೆ ಸಂಚಿತ ಪರಿಣಾಮ ಇಲ್ಲದಂತೆ ಇಳಿಸುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಆದೇಶ .

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 88 ವಿಸೇಬಿ 2010 ಬೆಂಗಳೂರು ದಿನಾಂಕ:25-11-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಬಿ. ಸಿ. ವಸಂತಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಹೊಸನಗರ, ಹಾಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿ 1957ರ ನಿಯಮ 8(iv)(ಎ) ರನ್ವಯ ಅವರ ಕಾಲವೇತನ ಶ್ರೇಣಿಯಲ್ಲಿ ಒಂದು ಹಂತವನ್ನು 2 ವರ್ಷಗಳ ಅವಧಿಗೆ ಸಂಚಿತ ಪರಿಣಾಮ ಇಲ್ಲದಂತೆ ಇಳಿಸುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಈ ದಂಡನೆಯ ಅವಧಿಯಲ್ಲಿ ಸದರಿಯವರು ವಾರ್ಷಿಕ ವೇತನ ಬಡ್ತಿಗೆ ಅನರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ.
5. ಸರ್ಕಾರದ ಅಧೀನ ಕಾರ್ಯದರ್ಶಿ, (ಸಮಿತಿಗಳು) ಶಿಕ್ಷಣ ಇಲಾಖೆ, ಬೆಂಗಳೂರು.
6. ಶ್ರೀ ಬಿ. ಸಿ. ವಸಂತಕುಮಾರ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ
7. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
8. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.